## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ರಿನ್ಯೂ ಸೌರ್ ಊರ್ಜಾ ಪ್ರೈ. ಲಿ. ರವರಿಗೆ 50 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕ ಸ್ಥಾಪಿಸಲು ನಿರಾಕ್ಷೇಪಣೆ ನೀಡುವ ಕುರಿತು.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 291.

* * *

**ಪ್ರಸ್ತಾವನೆ :-**

ಮೆ: ರಿನ್ಯೂ ಸೌರ್ ಊರ್ಜಾ ಪ್ರೈ. ಲಿ. ಕಂಪನಿಯವರು ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ತೆಲೆಖಾನ್, ಯೆರ್ದೊಡ್ಡಿ ಮತ್ತು ಬಗ್ಗಲಗುಡ್ಡ ಗ್ರಾಮಗಳಲ್ಲಿ 50 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಏಕ ಕಡತ ಪದ್ಧತಿಯಡಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ:-

- ಸದರಿ ಯೋಜನಾ ಪ್ರದೇಶವು ಖಾಸಗಿ ಜಮೀನಿನಲ್ಲಿರುತ್ತದೆ;
- ಈ ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್ತನ್ನು ಸ್ವಂತಕ್ಕೆ ಅಥವಾ 3ನೇ ವ್ಯಕ್ತಿಗೆ ಮಾರಾಟ ಮಾಡಲು ಉದ್ದೇಶಿಸಲಾಗಿದೆ;
- ಸದರಿ ಕಂಪನಿಯವರು ನಿಗದಿತ ಶುಲ್ಕವನ್ನು ಪಾವತಿಸಿರುತ್ತಾರೆ;

ಮೇಲ್ಕಂಡಂತೆ, ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 142 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 18.6.2016.**

ಮೆ: ರಿನ್ಯೂ ಸೌರ್ ಊರ್ಜಾ ಪ್ರೈ. ಲಿ. ಕಂಪನಿಯವರಿಗೆ ರಾಯಚೂರು ಜಿಲ್ಲೆಯ ಲಿಂಗಸಗೂರು ತಾಲ್ಲೂಕಿನ ತೆಲೆಖಾನ್, ಯೆರ್ದೊಡ್ಡಿ ಮತ್ತು ಬಗ್ಗಲಗುಡ್ಡ ಗ್ರಾಮಗಳಲ್ಲಿ 50 ಮೆ.ವ್ಯಾ. ಸಾಮರ್ಥ್ಯದ ಸೋಲಾರ್ ವಿದ್ಯುತ್ ಘಟಕವನ್ನು ಸ್ಥಾಪಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. ಮೆ: ರಿನ್ಯೂ ಸೌರ್ ಊರ್ಜಾ ಪ್ರೈ. ಲಿ. ರವರು ಸೌರ ನೀತಿ 2014-21 ರನ್ವಯ ಅಗತ್ಯವಿರುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ವಿದ್ಯುತ್ ಘಟಕದಲ್ಲಿ ಉತ್ಪಾದನೆಯಾಗುವ ವಿದ್ಯುತ್ತನ್ನು ಕೆ.ಇ.ಆರ್.ಸಿ.ಯ ನಿಯಮಗಳನ್ವಯ ಅಭಿವೃದ್ಧಿದಾರರು ಸ್ವಂತಕ್ಕೆ ಬಳಸಿಕೊಳ್ಳಲು ಅಥವಾ ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ;

--2)

KREDL

Updated (291, 301)

4. ಮೆ: ರಿನ್ಯೂ ಸೌರ್ ಊರ್ಜಾ ಪ್ರೈ. ಲಿ. ರವರು ಪ್ರಸ್ತಾಪಿತ ಸೋಲಾರ್ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
5. ಮೆ: ರಿನ್ಯೂ ಸೌರ್ ಊರ್ಜಾ ಪ್ರೈ. ಲಿ. ರವರು ಸ್ಥಾಪಿಸುತ್ತಿರುವ ಈ ಸೋಲಾರ್ ವಿದ್ಯುತ್ ಘಟಕ ಸ್ಥಾಪನೆಗೆ ಸರ್ಕಾರದ 2014-21ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳನ್ವಯ ಅನ್ವಯಿಸುವ ಸವಲತ್ತುಗಳು ದೊರಕುತ್ತವೆ;

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
☎ 22034674.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆ ರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6. ಜಿಲ್ಲಾಧಿಕಾರಿಗಳು, ರಾಯಚೂರು ಜಿಲ್ಲೆ, ರಾಯಚೂರು.
7. ಉಪ ಅರಣ್ಯ ಸಂರಕ್ಷಣಾಧಿಕಾರಿ, ರಾಯಚೂರು ಜಿಲ್ಲೆ, ರಾಯಚೂರು.
8. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಕಲಬುರಗಿ.
9. M/s. Renew Saur Urja Pvt. Ltd., No. 138, Ansal Chamber-II, Bikaji Cama Place, New Delhi - 110066.
10. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.